**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ವೈ.ಎಂ.ಸತೀಶ ರವರ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಿದ ಸೂಚನೆಗೆ ಉತ್ತರ.**

**ಸೂಚನೆ:**

ಬಳ್ಳಾರಿ ಜಿಲ್ಲೆಯ ಕುರುಗೋಡು ಪಟ್ಟಣದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗಾಂಧಿ ತತ್ವಾಧಾರಿತ ಬಾಲಕಿಯರ ವಸತಿ ಶಾಲೆಯು ಮೂಲ ಸೌಕರ್ಯವಿಲ್ಲದೇ ಕನಿಷ್ಟ ಪಕ್ಷ ಕಟ್ಟಡವೂ ಸಹ ಇಲ್ಲದೇ 40 ವರ್ಷ ಹಳೆಯದಾದ ಚಿತ್ರಮಂದಿರ ಕಟ್ಟಡದಲ್ಲಿ ಕಳೆದ 3 ವರ್ಷಗಳಿಂದ ಈ ವಸತಿ ಶಾಲೆಯು ನಡೆಯುತ್ತಿದೆ. ಇಲ್ಲಿ ಸುಮಾರು 226 ವಿದ್ಯಾರ್ಥಿನಿಯರಿದ್ದು, ಈ ಚಿತ್ರಮಂದಿರದ ಸಭಾಂಗಣದಲ್ಲಿಯೇ ತರಗತಿಗಳನ್ನು ನಡೆಸಲಾಗುತ್ತಿರುವುದು ವಿಪರ್ಯಾಸ ಸಂಗತಿ. ಸರಿಯಾದ ಶೌಚಾಲಯ ಕೊಠಡಿಗಳಿಲ್ಲದೇ, ಸರಿಯಾದ ಪಾಠ ಪ್ರವಚನಗಳನ್ನು ನಡೆಸಲು ಸಾಧ್ಯವಾಗುತ್ತಿಲ್ಲ. 1996ರಲ್ಲಿ ಜಿಲ್ಲಾ ಪರಿಷತ್ ಬಾಲಕಿಯರ ಪ್ರೌಢಶಾಲೆ ಹೆಸರಿನಲ್ಲಿ ಪ್ರಾರಂಭವಾಗಿ ನಂತರ ಗಾಂಧಿ ತತ್ವಧಾರಿತ ಬಾಲಕಿಯರ ವಸತಿ ಶಾಲೆಯಾಗಿ 2011-12 ರಲ್ಲಿ ಮೇಲ್ದರ್ಜೆಗೆರಿಸಿ ಸಮಾಜ ಕಲ್ಯಾಣ ಇಲಾಖೆಗೆ ಸೇರ್ಪಡೆ ಮಾಡಲಾಗಿದೆ. ಇದೇ ಮಾದರಿಯಲ್ಲಿ ಕುರಗೊಡು ತಾಲ್ಲೂಕು ಚಳ್ಳಗುರ್ಕಿ ಗ್ರಾಮದಲ್ಲೂ ಮತ್ತೊಂದು ಇದೇ ರೀತಿಯ ಶಾಲೆಯಿದ್ದು, ಮಠದ ಕೊಠಡಿಗಳಲ್ಲಿ ಶಾಲೆ ನಡೆಯುತ್ತಿದೆ. ಈ ಎರಡು ಶಾಲೆಗಳಿಗೆ ಅಗತ್ಯ ಮೂಲ ಸೌಲಭ್ಯ ಹಾಗೂ ಹೊಸ ಕಟ್ಟಡಗಳನ್ನು ಮಂಜೂರು ಮಾಡಲು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಹಿಂದುಳಿದ ವರ್ಗದ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಕುರುಗೋಡು (ಶಾಲೆ ಕೋಡ್-510) ಶಾಲೆಯು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆರವರು ಗೆಣಿಕೆಹಾಳು ಗ್ರಾಮದ ಸ.ನಂ.200 ರಲ್ಲಿ 6 ಎಕರೆ ಜಮೀನನ್ನು ಮಂಜೂರಾತಿ ನೀಡಿದ್ದು, ಸದರಿ ಜಮೀನಿನಲ್ಲಿ ವಸತಿ ಶಾಲಾ ಸಂಕೀರ್ಣವನ್ನು ನಿರ್ಮಾಣ ಮಾಡಲು ರೂ.18.00 ಕೋಟಿಗಳಿಗೆ ಅಂದಾಜು ಪಟ್ಟಿಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ, ಆರ್ಥಿಕ ಇಲಾಖೆಯು ಸದರಿ ಪ್ರಸ್ತಾವನೆಗೆ ಸಹಮತಿ ನೀಡಿರುವುದಿಲ್ಲ.

ಮೊರಾರ್ಜಿ ದೇಸಾಯಿ ವಸತಿ ಶಾಲೆ, ಚಳ್ಳಗುರ್ಕಿ (ಗಾಂಧಿತತ್ವ ಹುತಾತ್ಮರ ಶಾಲೆ) ವಸತಿ ಶಾಲೆಯು ಬಾಡಿಗೆ ರಹಿತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಸದರಿ ವಸತಿ ಶಾಲೆಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ ರವರು ಜೋಳದರಾಶಿ ಗ್ರಾಮದ ಸರ್ವೆ ನಂ:201 ಮತ್ತು 204 ರಲ್ಲಿ ಒಟ್ಟು 9.00 ಎಕರೆಗಳ ನಿವೇಶನವನ್ನು ಮಂಜೂರು ಮಾಡಲಾಗಿದ್ದು, ಅನುದಾನ ಲಭ್ಯತೆಯನ್ನಾಧರಿಸಿ ಹಂತ ಹಂತವಾಗಿ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುವುದು.

ಬಳ್ಳಾರಿ ಜಿಲ್ಲೆಯ ಕುರುಗೋಡು ತಾಲ್ಲೂಕಿನಲ್ಲಿ ಕುರುಗೋಡು ಪಟ್ಟಣ ಮತ್ತು ಚಳ್ಳಗುರ್ಕಿ ಗ್ರಾಮದಲ್ಲಿ ಬಾಲಕಿಯರ ವಸತಿ ಶಾಲೆಯ ವಿದ್ಯಾರ್ಥಿಗಳಿಗೆ ಮೂಲಸೌಕರ್ಯಗಳಾದ ಸಿದ್ದಪಡಿಸಿದ ಸಮವಸ್ತ್ರ, ಪಠ್ಯ ಪುಸ್ತಕ, ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು, ಶೂ, ಸಾಕ್ಸ್, ಟೈ ಮತ್ತು ಬೆಲ್ಟ್, ಶುಚಿ ಸಂಭ್ರಮ ಕಿಟ್, ಶಾಲಾ ಬ್ಯಾಗ್‌ಗಳನ್ನು ಒದಗಿಸಲಾಗಿದೆ. ಇತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಪ್ರತ್ಯೇಕವಾಗಿ ಯಾವುದೇ ಅನುದಾನ ನಿಗಧಿಯಾಗಿರುವುದಿಲ್ಲವಾದ್ದರಿಂದ **174** ಹಿಂದುಳಿದ ವರ್ಗಗಳ ವಸತಿ ಶಾಲೆ/ಕಾಲೇಜುಗಳಿಗೆ 2024-25 ನೇ ಸಾಲಿನ ಆಯವ್ಯಯದಲ್ಲಿ ಅನುದಾನ ಕೋರಿದ್ದು, ಅನುದಾನ ಒದಗಿಸಿದ ನಂತರ ಮೂಲಭೂತ ಸೌಕರ್ಯಗಳನ್ನು ಒದಗಿಸಲು ನಿಯಮಾನುಸಾರ ಕ್ರಮವಹಿಸಲಾಗುವುದು.

ಸಕಇ-ಎಂಡಿಎಸ್/253/2023

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು.